**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ :- ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಮೈಸೂರು ಇವರು ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುವ ಬಗ್ಗೆ – ಸೇವೆಯಿಂದ ಅಮಾನತ್ತುಗೊಳಿಸುವ – ಆದೇಶ

ಓದಲಾಗಿದೆ :-1. ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ರವರ ಪತ್ರ ಸಂಖ್ಯೆ : ಎಸಿಬಿ / ಮೈಸೂರು / ಮೊ.ಸಂ.02 / 2017, ದಿನಾಂಕ : 24.03.2017

2. ಪೊಲೀಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆ, ಮೈಸೂರು ರವರ ಪ್ರಾಥಮಿಕ ತನಿಖಾ ವರದಿ ಸಂಖ್ಯೆ : ಎಸಿಬಿ / ಮೈಸೂರು / ಮೊ.ಸಂ.02 / 2017, ದಿನಾಂಕ : 24.03.201

*****

**ಪ್ರಸ್ತಾವನೆ :**

ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ : 24.03.2017ರ ಪತ್ರದ ಜೊತೆ ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಮೈಸೂರು ಇವರು ತಮ್ಮ ಗೊತ್ತಾದ ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿದ್ದಾರೆ ಎಂಬ ಆರೋಪದ ಮೇರೆಗೆ ಇವರ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳ ಮೈಸೂರು ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ : 02/2007, ದಿನಾಂಕ : 02.03.2017ರಲ್ಲಿ ದಾಖಲಾಗಿದ್ದ ಪ್ರಥಮ ವರ್ತಮಾನ ವರದಿಯ ಪ್ರತಿ ಹಾಗೂ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ತನಿಖಾಧಿಕಾರಿಗಳ ದಿನಾಂಕ : 20.03.2017ರ ಪ್ರಾಥಮಿಕ ತನಿಖಾ ವರದಿಯ ಪ್ರತಿಯನ್ನು ಲಗತ್ತಿಸಿ ಕಳುಹಿಸುತ್ತಾ, ಸದರಿ ಪ್ರಾಥಮಿಕ ತನಿಖಾ ವರದಿ ಅನುಸಾರ ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಇಂಜಿನಿಯರ್ ರವರ ವಿರುದ್ಧದ ಆರೋಪವು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಅವರನ್ನು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಯಲ್ಲಿಯೇ ಮುಂದುವರೆಸಿದಲ್ಲಿ, ತನಿಖೆಯಲ್ಲಿ ಹಸ್ತಕ್ಷೇಪ ಮಾಡುವ, ಸಾಕ್ಷಿಗಳನ್ನು ನಾಶಪಡಿಸುವ ಅಥವಾ ತಿರುಚುವ ಹಾಗೂ ಸಾಕ್ಷಿದಾರರುಗಳಿಗೆ ಬೆದರಿಕೆಯೊಡ್ಡುವ ಸಾಧ್ಯತೆ ಇರುವುದರಿಂದ ಸದರಿಯವರನ್ನು ಕೂಡಲೇ ಸೇವೆಯಿಂದ ಅಮಾನತ್ತುಪಡಿಸುವಂತೆ ಹಾಗೂ ಅವರ ಹುದ್ದೆಯ ಲೀನ್‌ನ್ನು ಬೇರೆ ಕಡೆಗೆ ವರ್ಗಾಯಿಸುವಂತೆ ಕೋರಿರುತ್ತಾರೆ.

ಸರ್ಕಾರವು ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಇಂಜಿನಿಯರ್‌ರವರು ಬಲ್ಲ ಮೂಲಗಳಿಗಿಂತ ಹೆಚ್ಚಿನ ಆಸ್ತಿ ಹೊಂದಿದ್ದಾರೆಂಬ ಪ್ರಕರಣದ ಬಗ್ಗೆ ಪೊಲೀಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆ, ಮೈಸೂರು ರವರು ಸಲ್ಲಿಸಿರುವ ಪ್ರಾಥಮಿಕ ತನಿಖಾ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಮೈಸೂರು ಇವರ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳ ಮೈಸೂರು ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ

: 02/2007, ದಿನಾಂಕ : 02.03.2017ರಲ್ಲಿ ದಾಖಲಾದ ಮೊಕದ್ದಮೆ ಅನುಸಾರ ಭ್ರಷ್ಟಾಚಾರ ನಿಗ್ರಹ ದಳವು ಆರೋಪಿತ ಅಧಿಕಾರಿಯ ವಾಸದ ಮನೆ ಹಾಗೂ ಬ್ಯಾಂಕ್ ಲಾಕರ್‌ಗಳನ್ನು ದಿನಾಂಕ : 03.03.2017ರಂದು ಶೋಧನೆ ಮಾಡಿದ್ದು, ಸದರಿ ಸಮಯದಲ್ಲಿ ಸದರಿಯವರು ಈ ಕೆಳಕಂಡಂತೆ ಚರಾಸ್ತಿ / ಸ್ಥಿರಾಸ್ತಿ ಹೊಂದಿರುವುದು ಹಾಗೂ ಇತರ ವೆಚ್ಚಗಳನ್ನು ಮಾಡಿರುವುದು ತನಿಖೆಯಿಂದ ಕಂಡುಬಂದಿರುತ್ತದೆ :-

1. ಚರಾಸ್ತಿ / ಸ್ಥಿರಾಸ್ತಿ ಮೌಲ್ಯ ರೂ. 9,26,78,363/-
2. ಪರಿಶೀಲನಾ ಅವಧಿಯ ವೆಚ್ಚ ರೂ. 1,10,00,000/-

ಒಟ್ಟು ರೂ. 10,36,78,363/-

ಮುಂದುವರೆದು, ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಅಭಿಯಂತರರು ಇವರು ಪರಿಶೀಲನಾ ಅವಧಿಯಲ್ಲಿ ಒಟ್ಟು ರೂ. 3,09,20,000/-ಗಳ ಆದಾಯವನ್ನು ಅರ್ಜಿಸಿರುವುದು ಪ್ರಾಥಮಿಕ ತನಿಖೆಯಲ್ಲಿ ಕಂಡುಬಂದಿರುತ್ತದೆ. ಹಾಗಾಗಿ ಪರಿಶೀಲನಾ ಅವಧಿಯಲ್ಲಿ ಸದರಿ ಅಧಿಕಾರಿಯು ತಮ್ಮ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚುವರಿಯಾಗಿ ರೂ. 7,27,58,363/-ಗಳ ಆಸ್ತಿಯನ್ನು ಹೊಂದಿದ್ದು, ಒಟ್ಟಾರೆ ಶೇಕಡ 235.30ರಷ್ಟು ಹೆಚ್ಚುವರಿ ಆಸ್ತಿ ಹೊಂದಿರುವುದು ಕಂಡುಬಂದಿರುತ್ತದೆ.

ಶ್ರೀ ರಂಗನಾಥ ನಾಯ್ಕ, ಅಧೀಕ್ಷಕ ಅಭಿಯಂತರರು ರವರು ಮೇಲೆ ತಿಳಿಸಿದಂತೆ ತಮ್ಮ ಬಲ್ಲ ಆದಾಯ ಮೂಲಗಳಿಗಿಂತ ಹೆಚ್ಚಿನ ಆಸ್ತಿ ಅರ್ಜಿಸುವ ಮೂಲಕ ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಮತ್ತು ನಿಷ್ಠೆ ತೋರದೆ ತೀವ್ರತರವಾದ ಅಪರಾಧಿಕ ದುರ್ನಡತೆ ಎಸಗಿ, ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘಿಸಿರುವುದರಿಂದ ಸದರಿಯವರ ವಿರುದ್ಧದ ಕ್ರಿಮಿನಲ್ ಮೊಕದ್ದಮೆ ಹಾಗೂ ಈ ಸಂಬಂಧದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸದರಿಯವರನ್ನು ಸೇವೆಯಿಂದ ಅಮಾನತ್ತುಪಡಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 40 ಇಎನ್‌ಕ್ಯೂ 2017**
**ಬೆಂಗಳೂರು, ದಿನಾಂಕ : 28.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಮೈಸೂರು ಇವರು ಪರಿಶೀಲನಾ ಅವಧಿಯಲ್ಲಿ ತಮ್ಮ ಬಲ್ಲ ಆದಾಯ ಮೂಲಗಳಿಗಿಂತ ಹೆಚ್ಚಿನ ಆಸ್ತಿ ಹೊಂದುವ ಮೂಲಕ ಅಪರಾಧಿಕ ದುರ್ನಡತೆ ಎಸಗಿರುವುದರಿಂದ ಸದರಿ ಆರೋಪಕ್ಕೆ ಸಂಬಂಧಿಸಿದಂತೆ ಕ್ರಿಮಿನಲ್/ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಸದರಿಯವರನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10(1)(ಎಎ)ರಡಿ ಪ್ರದತ್ತವಾದ ಅಧಿಕಾರದನ್ವಯ ಅಮಾನತ್ತಿನಲ್ಲಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಸದರಿಯವರು ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮೋದನೆಯಿಲ್ಲದೆ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ.

ಶ್ರೀ ರಂಗನಾಥನಾಯ್ಕ, ಅಧೀಕ್ಷಕ ಅಭಿಯಂತರರು ರವರ ಹುದ್ದೆಯ ಲೀನ್‌ನನ್ನು ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ಇಲ್ಲಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

28/04/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ :-

1. ಮಹಾಲೇಖಪಾಲರು, (ಲೆಕ್ಕಪತ್ರ ಅ & ಇ) ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ
3. ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು
4. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ / ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
6. ಪೊಲೀಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆ, ಮೈಸೂರು
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
8. ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು
9. ಸಂಬಂಧಪಟ್ಟ ಅಧಿಕಾರಿಗೆ-ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಮುಖಾಂತರ

ಪ್ರತಿಯನ್ನು :

1. ಮಾನ್ಯ ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ
3. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ
4. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸುವ ಸಲುವಾಗಿ
5. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

***